**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಉತ್ತರ.**

**ವಿಷಯ:**

**"ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಕರ ಬಡ್ತಿ, ನೇಮಕಾತಿ ಹಾಗೂ ಉನ್ನತೀಕರಣ ಸಂಬಂಧ ವೃಂದ ಮತ್ತು ನೇಮಕಾತಿ ನಿಯಮಗಳನ್ನು ದೀರ್ಘಕಾಲದಿಂದ ಪರಿಷ್ಕರಣೆ ಆಗದೇ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯಬಯಸುತ್ತೇನೆ"**

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ:ಇಡಿ 290 ಎಸ್‌ಎಲ್‌ಬಿ 2006 ದಿ:06.08.2007 ರಲ್ಲಿ ಪ್ರೋ: ವೈದ್ಯನಾಥನ್ ವರದಿಗೆ ಅನುಮೋದನೆ ನೀಡಿದ್ದು, ಸದರಿ ವರದಿಯಲ್ಲಿನ 14 ಅಂಶಗಳ ಪೈಕಿ 13 ಅಂಶಗಳನ್ನು ಜಾರಿಗೊಳಿಸಲಾಗಿದ್ದು, ಉಳಿದ 14ನೇ ಅಂಶವಾದ ದೈಹಿಕ ಶಿಕ್ಷಣ ಶಿಕ್ಷಕರುಗಳ ಪದನಾಮವನ್ನು **"ಸಹ ಶಿಕ್ಷಕರು" (ದೈಹಿಕ ಶಿಕ್ಷಣ)** ಎಂದು ಪರಿಗಣಿಸಲು, ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರವಾಗಿ ತಿದ್ದುಪಡಿಯ ಕುರಿತು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರುಗಳ ಪದನಾಮವನ್ನು "ಸಹ ಶಿಕ್ಷಕರು" (ದೈಹಿಕ ಶಿಕ್ಷಣ) ಎಂದು ಪರಿಗಣಿಸುವ ಬಗ್ಗೆ ಕರಡು ಸಮಗ್ರ ತಿದ್ದುಪಡಿ ಪ್ರಸ್ತಾವನೆಯು ಇಲಾಖಾ ಮುಖ್ಯಸ್ಥರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರವಾಗಿ ತಿದ್ದುಪಡಿಯ ಕುರಿತು ಹಾಗೂ ದೈಹಿಕ ಶಿಕ್ಷಣ ಶಿಕ್ಷಕರುಗಳ ಪದನಾಮವನ್ನು "ಸಹ ಶಿಕ್ಷಕರು" (ದೈಹಿಕ ಶಿಕ್ಷಣ) ಎಂದು ಪರಿಗಣಿಸುವ ಬಗ್ಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಹಾಗೂ ಪ್ರೌಡ ಶಿಕ್ಷಣ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:24-05-2018ರಂದು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ದಿ:23/10/2018ರಂದು ನಡೆದ ವೃಂದ ಪರಿಶೀಲನಾ ಸಮಿತಿ ಸಭೆಯಲ್ಲಿ ಕರಡು ನಿಯಮಗಳಲ್ಲಿ ಕೆಲವೊಂದು ಅಂಶಗಳನ್ನು ಸೇರ್ಪಡೆಗೊಳಿಸಲು ಹಾಗೂ ಕೆಲವು ಅಂಶಗಳನ್ನು ಕೈಬಿಡಲು ನಿರ್ಣಯಿಸಿ, ಕರಡು ತಿದ್ದುಪಡಿ ನಿಯಮಗಳನ್ನು ಅನುಮೋದಿಸಿರುತ್ತಾರೆ.

ಅದರಂತೆ ಪರಿಶೀಲಿಸಿ, ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರ ತಿದ್ದುಪಡಿ ನಿಯಮಗಳ ಕುರಿತಂತೆ **ಆರ್ಥಿಕ ಇಲಾಖೆ, ಸಿಆಸು ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳ ಇಲಾಖೆಗಳೊಂದಿಗೆ ಸಮಾಲೋಚಿಸಲಾಗುತ್ತಿದೆ.** ಆರ್ಥಿಕ ಇಲಾಖೆ ಹಾಗೂ ಸಿಆಸು ಇಲಾಖೆಯು ತಿದ್ದುಪಡಿಯ ಅಂಶಗಳ ಕುರಿತಂತೆ ಹೆಚ್ಚುವರಿ ಮಾಹಿತಿ/ವಿವರಗಳನ್ನು ಒದಗಿಸುವಂತೆ ಕೋರಿದ್ದು, ಅದರಂತೆ ಪರಿಶೀಲಿಸಿ ಕ್ರಮವಹಿಸಲಾಗುತ್ತಿದೆ. ಆರ್ಥಿಕ ಇಲಾಖೆ ಹಾಗೂ ಸಿಆಸು ಇಲಾಖೆ ಇಲಾಖೆರವರು ಸಹಮತಿ ನೀಡಿದ ನಂತರ ಪರಿಶೀಲಿಸಿ, ನಿಯಮಾನುಸಾರ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ತಿದ್ದುಪಡಿಯನ್ನು ಪ್ರಕಟಿಸಲು ಕ್ರಮವಹಿಸಲಾಗುವುದು.

ಹಾಗೆಯೇ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 35 ಡಿಜಿಓ 2009, ದಿನಾಂಕ:29/05/2014ರಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಲಾಗಿದ್ದು, ಸದರಿ ನಿಯಮಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರನ್ನು ದೈಹಿಕ ಶಿಕ್ಷಣ ಉಪನ್ಯಾಸಕರಾಗಿ ಮೇಲ್ದರ್ಜೆಗೇರಿಸಲಾಗಿದೆ. ಶೇ. 50ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ಮತ್ತು ಶೇ. 50ರಷ್ಟು ಮತ್ತು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿದೆ.

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಮತ್ತು ಸಕಾಲ ಸಚಿವರು

ಸಂಖ್ಯೆ: ಇಪಿ 21 ಡಿಎಲ್ಎ 2020